Akashvani : Bangalore
Regional Bulletin In Kannada
03.03.2026 / 14.30  hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೂರವಾಣಿ ಕದ್ದಾಲಿಕೆ ವಿಚಾರ; ಪ್ರತಿಪಕ್ಷಗಳ ಆರೋಪ ತಳ್ಳಿಹಾಕಿದ ಮುಖ್ಯಮಂತ್ರಿ ಸಿದ್ದರಾಮಯ್ಯ
- ಖಮೇನಿ ಹತ್ಯೆ ಖಂಡಿಸಿ ನಡೆಯುತ್ತಿರುವ ಪ್ರತಿಭಟನೆಗಳಲ್ಲಿ ಕಾನೂನು ಉಲ್ಲಂಘಿಸಿದರೆ ಕಠಿಣ ಕ್ರಮ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಕೆ
- ಇರಾನ್-ಇಸ್ರೇಲ್ ಸಂಘರ್ಷ - ಸುರಕ್ಷಿತವಾಗಿ ತವರಿಗೆ ಮರಳಿದ ದುಬೈನಲ್ಲಿ ಸಿಲುಕಿದ್ದ ಕನ್ನಡಿಗರು
- ಇಂದು ವರ್ಷದ ಮೊದಲ ಚಂದ್ರಗ್ರಹಣ; ಬೆಂಗಳೂರಿನ ನೆಹರು ತಾರಾಲಯದಿಂದ ಗ್ರಹಣ ವೀಕ್ಷಣೆಗೆ ವ್ಯವಸ್ಥೆ

<><*<><>*><>

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮೇಲೆ ಕಣ್ಣಿಡಲು ಫೋನ್ ಕದ್ದಾಲಿಕೆ ನಡೆಯುತ್ತಿದೆ ಎಂಬ ಪ್ರತಿಪಕ್ಷ ನಾಯಕ ಆರ್.ಅಶೋಕ ಮತ್ತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮಾಡಿದ ಆರೋಪವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದ್ದಾರೆ. ಒಬ್ಬರು ಮುಖ್ಯಮಂತ್ರಿಯಾಗಿದ್ದವರು, ಇನೊಬ್ಬರು ಉಪಮುಖ್ಯಮಂತ್ರಿ ಮತ್ತು ಗೃಹ ಸಚಿವರಾಗಿದ್ದವರು, ಇವರ ಹೇಳಿಕೆಗಳನ್ನು ಗಮನಿಸಿದರೆ, ತಮ್ಮ ಅನುಭವ ಬಲದಿಂದಲೇ ಈ ಆರೋಪ ಮಾಡುತ್ತಿರುವಂತೆ ಕಾಣಿಸುತ್ತಿದೆ ಎಂದು ವ್ಯಂಗ್ಯವಾಡಿದ್ದಾರೆ. ಉಭಯ ನಾಯಕರು ರಚನಾತ್ಮಕ ವಿರೋಧ ಪಕ್ಷದ ರೀತಿಯಲ್ಲಿ ಕೆಲಸ ಮಾಡಿದರೆ, ರಾಜ್ಯಕ್ಕೆ ಒಳ್ಳೆಯದು ಎಂದು ಸಲಹೆ ನೀಡಿದ್ದಾರೆ. ಅಂತಿಮವಾಗಿ ಡಿ.ಕೆ.ಶಿವಕುಮಾರ್ ಸೇರಿದಂತೆ ತಾವು ಪಕ್ಷದ ಹೈಕಮಾಂಡ್ ಆದೇಶಕ್ಕೆ ತಲೆಬಾಗಲೇಬೇಕು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಇರಾನ್ ಪರಮೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆ ಖಂಡಿಸಿ ರಾಜ್ಯದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಲ್ಲಿ ಕಾನೂನು ಉಲ್ಲಂಘಿಸಿದರೆ ಕಠಿಣಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ.  ಬೆಂಗಳೂರಿನಲ್ಲಿಂದು

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾನೂನು ಎಲ್ಲರಿಗೂ ಒಂದೇ ಎಂದು ತಿಳಿಸಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಸಿಲುಕಿರುವ ಕನ್ನಡಿಗರು ಸೇರಿದಂತೆ ಭಾರತೀಯರಿಗೆ ಸಹಾಯಕೋರಿ ರಾಜ್ಯ ಸರ್ಕಾರ, ಕೇಂದ್ರಕ್ಕೆ ಪತ್ರ ಬರೆದಿರುವುದನ್ನು ಸಚಿವರು ಇದೇ ವೇಳೆ ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಇರಾನ್-ಇಸ್ರೇಲ್ ನಡುವಿನ ಸಂಘರ್ಷದಿಂದಾಗಿ ವಿಮಾನ ರದ್ದುಗೊಂಡು ಯುಎಇಯಲ್ಲಿ ಸಿಲುಕಿಕೊಂಡಿದ್ದ ಹಲವಾರು ಕನ್ನಡಿಗರು ಇಂದು ರಾಜ್ಯಕ್ಕೆ ಮರಳಿದ್ದಾರೆ. ಕಳೆದ ರಾತ್ರಿ ದುಬೈನಿಂದ ಹೊರಟ ವಿಮಾನವು, ಇಂದು ಬೆಳಗಿನ ಜಾವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿದಿದೆ. ಈ ವಿಮಾನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಬೋಜೇಗೌಡ ಮತ್ತು ಬ್ಯಾಡ್ಮಿಂಟನ್ ತಾರೆ ಪಿ.ವಿ.ಸಿಂಧು ಸೇರಿದ್ದಾರೆ. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಬೋಜೇಗೌಡ ಅವರು, ಕೇಂದ್ರ ಸಚಿವ ಎಚ್.ಡಿ..ಕುಮಾರಸ್ವಾಮಿ ತಮ್ಮನ್ನು ಸಂಪರ್ಕಿಸಿ ಹೋಟೆಲ್, ವಸತಿ ವ್ಯವಸ್ಥೆ ಮಾಡಿದ್ದರು. ಹೋಟೆಲ್ ಬಳಿಯೂ ಬಾಂಬ್ ದಾಳಿ ನಡೆದಿದ್ದು, ನಮ್ಮನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಯಿತು ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಕೃಷ್ಣಬೈರೇಗೌಡ ಹಾಗೂ ಎಂ.ಬಿ.ಪಾಟೀಲ್ ದೂರವಾಣಿ ಮೂಲಕ ಮಾತುಕತೆ ನಡೆಸಿ, ಧೈರ್ಯ ತುಂಬಿದ್ದರು ಎಂದು ತಿಳಿಸಿದ್ದಾರೆ.

<><*<><>*><>

ಮಧ್ಯಪ್ರಾಚ್ಯ ಬಿಕ್ಕಟ್ಟಿನಿಂದಾಗಿ ಅರಬ್ ರಾಷ್ಟ್ರಗಳಿಗೆ ಪ್ರವಾಸಕ್ಕೆ ತೆರಳಿದ್ದ ಜಿಲ್ಲೆಯ ೧೦ ಮಂದಿ ಪ್ರವಾಸಿಗರು ದುಬೈನ ಹಲವೆಡೆ ಸಿಲುಕಿದ್ದು ಸದ್ಯ ಸುರಕ್ಷಿರಾಗಿದ್ದಾರೆ ಎಂದು ಚಿಕ್ಕಮಗಳೂರು ಜಿಲ್ಲಾಡಳಿತ ತಿಳಿಸಿದೆ. ೧೦ ಜನರ ಕುಟುಂಬಸ್ಥರನ್ನು ಜಿಲ್ಲಾಡಳಿತ ಸಂಪರ್ಕಿಸಿ ಮಾಹಿತಿ ಪಡೆದಿದೆ. ಇವರನ್ನು ಸುರಕ್ಷಿತವಾಗಿ ಕರೆತರಲು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಕ್ರಮ ಕೈಗೊಳ್ಳುತ್ತಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ.

<><*<><>*><>

ಮಧ್ಯಪ್ರಾಚ್ಯ ಬಿಕ್ಕಟ್ಟಿನ ನಡುವೆ ಏರ್ ಇಂಡಿಯಾದ ಕೆಲವು ವಿಮಾನಗಳು ದುಬೈನಿಂದ ಬೆಂಗಳೂರು, ನವದೆಹಲಿ, ಚೆನ್ನೈಗೆ ವಿಮಾನ ಹಾರಾಟ ನಡೆಸಿವೆ. ಈ ನಡುವೆ ಸತತ ನಾಲ್ಕನೇ ದಿನವೂ ದುಬೈ ಮತ್ತು ಮಧ್ಯಪ್ರಾಚ್ಯ ದೇಶಗಳಿಗೆ ೩೧ ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಚೆನ್ನೈನಿಂದ ಸಿಂಗಾಪುರ, ಮಲೇಷ್ಯಾ, ಶ್ರೀಲಂಕಾ, ಲಂಡನ್, ಥೈಲ್ಯಾಂಡ್, ಜರ್ಮನಿ, ಹಾಂಗ್‌ಕಾಂಗ್, ಮಾರಿಷಸ್‌ಗಳಿಗೆ ತೆರಳುವ ವಿಮಾನ ಸೇವೆಗಳಲ್ಲಿ ಯಾವುದೇ ಅಡಚಣೆಯಾಗಿಲ್ಲ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ.

<><*<><>*><>

ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿ ಬಿಕ್ಕಟ್ಟು ಉಂಟಾಗಿದ್ದು, ಜಿಲ್ಲೆಯ ಪ್ರಯಾಣಿಕರ ಸಹಾಯಕ್ಕಾಗಿ ಸಹಾಯವಾಣಿ ಆರಂಭಿಸಲಾಗಿದೆ ಎಂದು ಯಾದಗಿರಿ ಹೆಚ್ಚುವರಿ ಜಿಲ್ಲಾಧಿಕಾರಿ ರಮೇಶ ಕೋಲಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಹಾಯವಾಣಿ ಸಂಖ್ಯೆಗಳಿಗೆ ಯಾದಗಿರಿ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ ೦೮೪೭೩-೨೫೩೯೫೦, ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ ೦೮೦ ೨೨೩೪೦೬೭೬, ೦೮೦೨೨-೨೫೩೭೦೭, ಟೋಲ್ ಫ್ರೀ ಸಂಖ್ಯೆ ೧೦೭೦ಗೆ ಕರೆ ಮಾಡಿ ಮಾಹಿತಿ ಹಾಗೂ ಸಹಾಯ ಪಡೆಯಬಹುದು ಎಂದು ಹೇಳಿದ್ದಾರೆ.

<><*<><>*><>

ಇಂದು ವರ್ಷದ ಮೊದಲ ಚಂದ್ರಗ್ರಹಣ ಗೋಚರಿಸುತ್ತಿದೆ. ಈ ಬಾರಿಯ ಚಂದ್ರಗ್ರಹಣ ಭಾರತದಲ್ಲಿ ಭಾಗಶಃ ಗೋಚರಿಸಲಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೩.೨೧ ಕ್ಕೆ ಚಂದ್ರಗ್ರಹಣ ಆರಂಭವಾಗಿ ಸಂಜೆ ೬.೪೬ ಕ್ಕೆ ಕೊನೆಗೊಳ್ಳಲಿದೆ. ಗ್ರಹಣದ ನೇರ ವೀಕ್ಷಣೆಗೆ ಬೆಂಗಳೂರಿನ ಜವಹರ್‌ಲಾಲ್ ನೆಹರು ತಾರಾಲಯದ ಸಿ.ವಿ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಮಧ್ಯಾಹ್ನ ೩ ರಿಂದ ನೇರಪ್ರಸಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಬಾರಿಯ ಚಂದ್ರಗ್ರಹಣ ಅರುಣಾಚಲ ಪ್ರದೇಶ, ಅಸ್ಸಾಂ, ಮಣಿಪುರ, ಮಿಜೋರಾಂ, ನಾಗಾಲ್ಯಾಂಡ್‌ನಲ್ಲಿ ಗೋಚರಿಸಲಿದೆ. ಬೆಂಗಳೂರು, ಚೆನ್ನೈ, ದೆಹಲಿ ಮತ್ತು ಮುಂಬೈನಲ್ಲಿ ಭಾಗಶಃ ಗೋಚರಿಸಲಿದೆ.

<><*<><>*><>

ಇಂದು ಸಂಭವಿಸಲಿರುವ ಕೇತುಗ್ರಸ್ತ ಚಂದ್ರ ಗ್ರಹಣದ ಹಿನ್ನಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಘಾಟಿ ಕ್ಷೇತ್ರದ ಸುಬ್ರಹ್ಮಣ್ಯಸ್ವಾಮಿ ದೇವಾಲಯ, ಕನಸವಾಡಿಯ ಶನಿಮಹಾತ್ಮ ದೇವಾಲಯಗಳನ್ನು ಮುಚ್ಚಲಾಗಿದೆ. ಸಂಜೆ ೭.೪೫ ಗಂಟೆ ನಂತರ ಗ್ರಹಣ ವಿಮೋಚನೆ ನಂತರ ದೇವಾಲಯ ತೆರೆಯಲಾಗುವುದು ಎಂದು ದೇವಾಲಯದ ಪ್ರಕಟಣೆ ತಿಳಿಸಿದೆ.

<><*<><>*><>

ಮಲ್ಲಿಕಾರ್ಜುನ ಮುತ್ಯಾ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಲಕಿಯನ್ನು ಗುರುತಿಸಬಹುದಾದ ಯಾವುದೇ ಮಾಹಿತಿ, ಕುಟುಂಬ ಸದಸ್ಯರ ಫೋಟೋಗಳು ಅಥವಾ ಸಂಗ್ರಹಿತ ವಿಡಿಯೋ ಕ್ಲಿಪ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡುವುದು ಹಾಗೂ ಹಂಚಿಕೊಳ್ಳುವುದು ಕಾನೂನುಬಾಹಿರವಾಗಿದೆ ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ತಿಳಿಸಿದ್ದಾರೆ. ಇಂತಹ ಕೃತ್ಯ ಎಸಗಿದವರ ವಿರುದ್ಧ

ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಚ್ಚರಿಕೆ ನೀಡಿದ್ದಾರೆ. ಸಾರ್ವಜನಿಕರು ಕಾನೂನು ನಿಯಮಗಳನ್ನು ಪಾಲಿಸಿ ಸಹಕರಿಸಬೇಕೆಂದು ಮನವಿ ಮಾಡಿದ್ದಾರೆ.

<><*<><>*><>

ಮುಂಬರುವ ೨೦೨೭ರ ಜನಗಣತಿ ಕಾರ್ಯವನ್ನು ಯಶಸ್ವಿಯಾಗಿ ನಡೆಸಲು ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ಈ ಬಾರಿಯ ಜನಗಣತಿಯು ಸಂಪೂರ್ಣವಾಗಿ ತಂತ್ರಜ್ಞಾನ ಆಧಾರಿತವಾಗಿದ್ದು, ಸರ್ಕಾರದ ನಿರ್ದೇಶನದಂತೆ ಮೊದಲ ಬಾರಿಗೆ ಡಿಜಿಟಲ್ ರೂಪದಲ್ಲಿ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಹಳೆಯ ಮಾದರಿಯಂತೆ ಕಾಗದದ ಬಳಕೆ ಇರುವುದಿಲ್ಲ ಎಂದು ಸ್ಪ?ಪಡಿಸಿದ್ದಾರೆ.

ಧ್ವನಿ: ಗಂಗಾಧರ ಸ್ವಾಮಿ ( ೨೫ ಸೆಕೆಂಡ್ಸ್)

<><*<><>*><>

ಚಾಮರಾಜನಗರ ಗಡಿಭಾಗದಲ್ಲಿರುವ ತಮಿಳುನಾಡಿನ ತಾಳವಾಡಿ ತಾಲೂಕಿನ ಕೊಂಗಳ್ಳಿ ಮಲ್ಲಿಕಾರ್ಜುನಸ್ವಾಮಿ ಬೆಟ್ಟದಲ್ಲಿ ಇಂದು ಅದ್ದೂರಿಯಾಗಿ ಕೊಂಡೋತ್ಸವ ಜಾತ್ರೆ ನಡೆಯಿತು. ಪ್ರತಿವರ್ಷ ನಡೆಯುವ ಕೊಂಡೋತ್ಸವದ ಅಂಗವಾಗಿ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯ ನಡೆಯಿತು. ದೇವಾಲಯ ಅರ್ಚಕ ಮಲ್ಲಿಕಾರ್ಜುನ ಪ್ರಸಾದ್ ಕೊಂಡ ಹಾಯ್ದರು. ಈ ಜಾತ್ರೆಯ ಮತ್ತೊಂದು ವಿಶೇಷ ಎಂದರೆ ಇಲ್ಲಿನ ಪ್ರಸಾದ. ಕೊಂಗಳ್ಳಿ ಬೆಟ್ಟದ ಸುತ್ತಮುತ್ತಲಿನ ೧೮ ಕ್ಕೂ ಅಧಿಕ ಗ್ರಾಮಗಳ ಜನರು ಒಗ್ಗೂಡಿ ಪ್ರಸಾದ ತಯಾರಿಸಲಿದ್ದು ಅನ್ನ, ಸಾರು, ಪಾಯಸದ ಜೊತೆ ರಾಗಿ ಮುದ್ದೆ- ಹಲಸಿನಕಾಯಿ ವಿತರಿಸುವುದು ವಾಡಿಕೆ. ಅದರಂತೆ, ಇಂದು ಕೂಡ ೪ ಸಾವಿರದ ೫೦೦ ಮುದ್ದೆಗಳನ್ನು ತಯಾರಿಸಿ ಭಕ್ತರಿಗೆ ವಿತರಿಸಲಾಗಿದೆ.

<><*<><>*><>

ಆಕಸ್ಮಿಕ ಅಗ್ನಿ ಅವಘಡ ಸಂಭವಿಸಿದಾಗ ತಕ್ಷಣ ಜೀವಹಾನಿ-ಅನಾಹುತ ತಡೆಯಬೇಕಿದ್ದು, ಇದಕ್ಕೆ ಪೂರ್ವ ತರಬೇತಿ ಅತ್ಯವಶ್ಯಕ ಎಂದು ರೈಲ್ವೆ ಇಲಾಖೆಯ ಹುಬ್ಬಳ್ಳಿ ಮುಖ್ಯ ಶಾಖೆಯ ಹಣಕಾಸು ಸಲಹೆಗಾರ ಅಧಿಕಾರಿ ಚೇತನ್ ತಿಳಿಸಿದ್ದಾರೆ. ಮಂಡ್ಯ ರೈಲ್ವೆ ನಿಲ್ದಾಣ ಸಮೀಪ ರೈಲ್ವೆ ಅಧಿಕಾರಿಗಳು ಆಯೋಜಿಸಿದ್ದ ಅಗ್ನಿ ಅವಘಡ ತಡೆಯುವ ತರಬೇತಿ ಮತ್ತು ಮಾಹಿತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅಗ್ನಿ ಅವಘಡ ಸಂಭವಿಸಿದಾಗ ಯಾವುದೇ ಮುಂಜಾಗ್ರತಾ ಕ್ರಮ-ರಕ್ಷಣೆ ಇಲ್ಲದೆ ಬೆಂಕಿ ನಂದಿಸಲು ಹೋಗಬಾರದು ಎಂದು ಹೇಳಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ  ಯೋಗಿನಾರೇಯಣ ಯತೀಂದ್ರರ ಜಯಂತಿ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಯೋಗಿನಾರೇಯಣ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿ, ತಮ್ಮ ಕಾಲಜ್ಞಾನದಲ್ಲಿ ಬದುಕಿನ ಮೌಲ್ಯಗಳನ್ನು ತಿಳಿಸುವ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದ ಮಹನೀಯರು ಎಂದು ಬಣ್ಣಿಸಿದರು.

<><*<><>*><>

ರಾಜ್ಯದಲ್ಲಿ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಜೊತೆಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗೂ ಸರ್ಕಾರ ಆದ್ಯತೆ ನೀಡಿದೆ ಎಂದು ಯಾದಗಿರಿಯ ಸುರಪುರ ಮತಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  <>*><>